All India Radio: Bangalore

Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

05.12.2025 6.40 PM

<><><><>

ಮುಖ್ಯಾಂಶಗಳು

- ರಾಜ್ಯದಲ್ಲಿ ಕಬ್ಬಿನ ಇಳುವರಿ ಹೆಚ್ಚಿಸಲು ಸಂಶೋಧನೆ ನಡೆಸುವಂತೆ ಮಂಡ್ಯ ಕೃಷಿ ವಿಶ್ವವಿದ್ಯಾಲಯದ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ
- ಎಸ್‌ಎಸ್‌ಎಲ್‌ಸಿ ಪರೀಕ್ಷೆ ಈ ಬಾರಿಯೂ ವರ್ಷಕ್ಕೆ ಮೂರು ಸಲ ನಡೆಯಲಿದೆ - ಶಿಕ್ಷಣ ಸಚಿವ ಮಧು ಬಂಗಾರಪ್ಪ ಸ್ಪಷ್ಟನೆ
- ವಿದ್ಯಾರ್ಥಿಗಳಿಗೆ ಭಗವದ್ಗೀತೆ ಪಠ್ಯವಾಗಬೇಕು - ಕೇಂದ್ರ ಸಚಿವ ಕುಮಾರಸ್ವಾಮಿ ಅಭಿಮತ
- ಉಪಲೋಕಾಯುಕ್ತರ ಭ್ರಷ್ಟಾಚಾರ ಹೇಳಿಕೆ ವಿಚಾರ ಸದನದಲ್ಲಿ ಚರ್ಚೆಗೆ ಸಿದ್ಧ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
- ಪ್ರಧಾನಮಂತ್ರಿ ಗ್ರಾಮೀಣ ಸಡಕ್ ಯೋಜನೆ ಅಡಿಯಲ್ಲಿ ಪೂರ್ಣಗೊಂಡ ರಾಜ್ಯದ ೨೧ ರಸ್ತೆಗಳು ಕಳಪೆ - ರಾಜ್ಯಸಭೆಗೆ ಕೇಂದ್ರ ಸರ್ಕಾರ ಸ್ಪಷ್ಟನೆ

<><><><>

ಮಹಾರಾಷ್ಟ್ರದಲ್ಲಿ ಕಬ್ಬಿನ ಇಳುವರಿ ಶೇಕಡ ೧೩ ರಿಂದ ೧೪ರಷ್ಟಿದ್ದು, ಮಂಡ್ಯ ಭಾಗದಲ್ಲಿ ಶೇಕಡ ೯.೫ರಷ್ಟಿದೆ. ಈ ಕುರಿತಂತೆ ಸಂಶೋಧನೆ ನಡೆಸಬೇಕು ಹಾಗೂ ಮಣ್ಣಿನ ಪರೀಕ್ಷೆ ನಡೆಸಿ, ಇಳುವರಿ ಹೆಚ್ಚಿಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡ್ಯ ಕೃಷಿ ವಿಶ್ವ ವಿದ್ಯಾಲಯದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಮಂಡ್ಯದಲ್ಲಿಂದು ಆಯೋಜಿಸಲಾಗಿದ್ದ ಕೃಷಿ ಮೇಳ - ೨೦೨೫ ಉದ್ಘಾಟಿಸಿ ಮಾತನಾಡಿದ ಅವರು, ರೈತರು ತಾವು ಬೆಳೆದ ಭತ್ತ, ಕಬ್ಬು ಇನ್ನಿತರ ಬೆಳೆ ಜೊತೆಗೆ ಮೌಲ್ಯವರ್ಧನೆಯುಳ್ಳ ಉಪ ಬೆಳೆಗಳನ್ನು ಬೆಳೆಯಬೇಕು ಎಂದು ಕರೆ ನೀಡಿದ್ದಾರೆ.

****ಧ್ವನಿ***ಮುಖ್ಯಮಂತ್ರಿ

ಇದೇ ವೇಳೆ ಮಾತನಾಡಿದ ಕೃಷಿ ಸಚಿವ ಚಲುವರಾಯಸ್ವಾಮಿ ಮಂಡ್ಯ, ಮೈಸೂರು, ಕೊಡಗು, ಚಾಮರಾಜನಗರ ಭಾಗದ ರೈತರನ್ನು ಆರ್ಥಿಕವಾಗಿ ಅಭಿವೃದ್ಧಿ ಹೊಂದುವಂತೆ ಮಾಡಲು ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾನಿಲಯ ಸ್ಥಾಪಿಸಲಾಗಿದೆ ಎಂದು ತಿಳಿಸಿದ್ದಾರೆ. ಫಿಲಿಫೈನ್ಸ್ ಅಂತಾರಾಷ್ಟ್ರೀಯ ಭತ್ತ ಸಂಶೋಧನಾ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಂಡು, ರೋಗ ನಿರೋಧಕ ಭತ್ತದ ತಳಿಗಳನ್ನು ರಾಜ್ಯದಲ್ಲಿ ಬೆಳೆಯಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ಮಾತನಾಡಿದ ಶಾಸಕ ದರ್ಶನ್ ಪುಟ್ಟಣ್ಣಯ್ಯ, ಮಣ್ಣಿನ ಗುಣಮಟ್ಟವನ್ನು ಕಾಪಾಡುವ ಹಾಗೂ

ಕಡಿಮೆ ನೀರು ಬಳಕೆ ಮಾಡಿ, ಹೆಚ್ಚು ಇಳುವರಿ ಪಡೆಯುವ ಅನೇಕ ಹೊಸ ತಳಿಯ ಬಗ್ಗೆ ಕೃಷಿ ಮೇಳದಲ್ಲಿ ಮಾಹಿತಿ ನೀಡಲಾಗುತ್ತಿದೆ. ಇದನ್ನು ರೈತರು ತಮ್ಮ ಬೇಸಾಯದಲ್ಲಿ ಅಳವಡಿಸಿಕೊಳ್ಳುವಂತೆ ಕರೆ ನೀಡಿದರು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಂಡ್ಯ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯ ಅಭಿವೃದ್ಧಿಪಡಿಸಿದ ಐದು ಕೃಷಿ ತಳಿಗಳನ್ನು ಮತ್ತು ೬ ತಾಂತ್ರಿಕತೆಗಳನ್ನು ಲೋಕಾರ್ಪಣೆಗೊಳಿಸಿದರು.

<><><><>

ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ ಈಗಿನಂತೆ ವರ್ಷಕ್ಕೆ ಮೂರು ಬಾರಿಯೇ ಮುಂದುವರಿಯಲಿದೆ ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವ ಮಧು ಬಂಗಾರಪ್ಪ ಸ್ಪಷ್ಟಪಡಿಸಿದ್ದಾರೆ. ಶಿವಮೊಗ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪರೀಕ್ಷೆಯನ್ನು ಎರಡು ಬಾರಿಗೆ ಇಳಿಸುವ ಯಾವುದೇ ಪ್ರಸ್ತಾಪ ಸರ್ಕಾರದ ಮುಂದೆ ಇಲ್ಲ ಎಂದು ತಿಳಿಸಿದ್ದಾರೆ.

****ಧ್ವನಿ**** ಮಧು ಬಂಗಾರಪ್ಪ

ಮಾಧ್ಯಮಗಳಲ್ಲಿ ಪ್ರಕಟವಾಗಿರುವ ಸುದ್ದಿಗಳಿಂದ ಮಕ್ಕಳಲ್ಲಿ ಗೊಂದಲ ಉಂಟಾಗಲಿದೆ. ಈ ಬಗ್ಗೆ ಮಾಧ್ಯಮಗಳು ಜವಾಬ್ದಾರಿಯಿಂದ ವರ್ತಿಸುವಂತೆ ಸಲಹೆ ನೀಡಿದ್ದಾರೆ.

<><><><>

ವಿದ್ಯಾರ್ಥಿಗಳಿಗೆ ಪ್ರತಿ ಹಂತದಲ್ಲಿಯೂ ಈ ನೆಲದ ಪವಿತ್ರ ಗ್ರಂಥ ಭಗವದ್ಗೀತೆ ಪಠ್ಯವಾಗಬೇಕು ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ಅಭಿಪ್ರಾಯಪಟ್ಟಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ರಾಮಾಯಣ, ಮಹಾಭಾರತ ಮಹಾಕಾವ್ಯಗಳನ್ನು ಮಕ್ಕಳಿಗೆ ಬೋಧನೆ ಮಾಡುವುದು ಅಗತ್ಯ ಎಂದು ಪ್ರತಿಪಾದಿಸಿದ್ದಾರೆ. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಅವರು, ಪವಿತ್ರ ಗ್ರಂಥ ಭಗವದ್ಗೀತೆಯನ್ನು ಉಡುಗೊರೆಯಾಗಿ ನೀಡಿರುವುದು ಶ್ಲಾಘನೀಯ ಎಂದು ಹೇಳಿದ್ದಾರೆ.

<><><><>

ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಭೇಟಿಯಾಗಿದ್ದು ನಿಜ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭ್ರಷ್ಟಾಚಾರ ಕುರಿತು ಉಪಲೋಕಾಯುಕ್ತರ ವರದಿಯನ್ನು ಪ್ರತಿಪಕ್ಷ ನಾಯಕ ಆರ್. ಅಶೋಕ ಅಧಿವೇಶನದಲ್ಲಿ ಪ್ರಸ್ತಾಪಿಸಲಿ ಎಂದು ಹೇಳಿದ್ದಾರೆ. ಅಧಿವೇಶನದಲ್ಲಿ ಬಿಜೆಪಿ ನಾಯಕರ ಎಲ್ಲಾ ಆರೋಪಗಳಿಗೆ ಉತ್ತರ ನೀಡುವುದಾಗಿ ತಿರುಗೇಟು ನೀಡಿದ್ದಾರೆ. ಕೇಂದ್ರ ಸಚಿವರು ಹಾಗೂ ಸಂಸದರೊಂದಿಗೆ ಚರ್ಚಿಸಿ, ಶೀಘ್ರವೇ ದೆಹಲಿಯಲ್ಲಿ ಸಂಸದರ ಸಭೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಅವರು ಈಗಿನ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ಬಗ್ಗೆ ಮಾತನಾಡಿದ್ದಾರೆಯೇ ಹೊರತು ಬಿಜೆಪಿ ಬಗ್ಗೆ ಹೇಳಿಲ್ಲ ಎಂದು ಪ್ರತಿಪಕ್ಷ

ನಾಯಕ ಆರ್.ಅಶೋಕ ಸ್ಪಷ್ಟಡಿಸಿದ್ದಾರೆ ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಪ ಲೋಕಾಯುಕ್ತರು ಕಾಂಗ್ರೆಸ್ ಸರ್ಕಾರದ ೬೩ ಪರ್ಸೆಂಟ್ ಭ್ರಷ್ಟಾಚಾರದ ಬಗ್ಗೆ ಹೇಳಿದ್ದು, ಅವರು ೨೦೧೯ರಲ್ಲಿ ಎಂದು ಎಲ್ಲೂ ಪ್ರಸ್ತಾಪ ಮಾಡಿಲ್ಲ ಎಂದು ತಿಳಿಸಿದ್ದಾರೆ. ವಾಲ್ಮೀಕಿ ನಿಗಮದ ಹಗರಣ, ಮುಡಾ ಹಗರಣ, ಗುತ್ತಿಗೆದಾರರು ಮಾಡಿರುವ ಆರೋಪ ಮೊದಲಾದವು ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರಕ್ಕೆ ಸಾಕ್ಷಿ ಎಂದು ಹೇಳಿದ್ದಾರೆ.

*****ಧ್ವನಿ****ಆರ್. ಅಶೋಕ

ಬೆಳಗಾವಿ ಅಧಿವೇಶನದಲ್ಲಿ ಅವಿಶ್ವಾಸ ಮಂಡನೆ ಬಗ್ಗೆ ಬಿಜೆಪಿಯಲ್ಲಿ ಯಾವುದೇ ತೀರ್ಮಾನವಾಗಿಲ್ಲ. ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆಯಾಗಬೇಕೆಂದು ಆಗ್ರಹಿಸಿದ್ದಾರೆ.

<><><><>

ಪ್ರಧಾನಮಂತ್ರಿ ಗ್ರಾಮೀಣ ಸಡಕ್ ಯೋಜನೆಯಡಿಯಲ್ಲಿ ಪೂರ್ಣಗೊಂಡ ಮೂರು ಸಾವಿರದ ೯೮೬ ರಸ್ತೆ ಕಾಮಗಾರಿಗಳಲ್ಲಿ ೫೧೦ ರಸ್ತೆಗಳು ಕಳಪೆ ಗುಣಮಟ್ಟದಿಂದ ಕೂಡಿವೆ ಎಂದು ರಾಜ್ಯಸಭೆಗೆ ಕೇಂದ್ರ ಗ್ರಾಮೀಣಾಭಿವೃದ್ಧಿ ರಾಜ್ಯ ಸಚಿವ ಕಮಲೇಶ್ ಪಾಸ್ವಾನ್ ತಿಳಿಸಿದ್ದಾರೆ. ಕರ್ನಾಟಕದಲ್ಲಿ ನಡೆದ ೧೫೩ ಯೋಜನೆಗಳನ್ನು ಪರಿಶೀಲಿಸಲಾಗಿದ್ದು, ೨೧ ರಸ್ತೆಗಳು ಕಳಪೆಯಾಗಿವೆ ಎಂದು ಹೇಳಿದ್ದಾರೆ.  ಬಾಳಿಕೆ ಮತ್ತು ವೆಚ್ಚದ ದಕ್ಷತೆಯನ್ನು ಹೆಚ್ಚಿಸಲು ಪಿಎಂಜಿಎಸ್‌ವೈ, ಕೋಲ್ಡ್ ಮಿಕ್ಸ್, ತ್ಯಾಜ್ಯ ಪ್ಲಾಸ್ಟಿಕ್ ಮಿಶ್ರಣಗಳು, ಹಾರು ಬೂದಿ, ಸಿಮೆಂಟ್ ಸ್ಥಿರಗೊಳಿಸಿದ ಬೇಸ್‌ಗಳು ಮತ್ತು ಗುಡ್ಡಗಾಡು ಪ್ರದೇಶಗಳಲ್ಲಿ ಲಭ್ಯವಿರುವ ವಸ್ತುಗಳು ಸೇರಿದಂತೆ ಹಸಿರು ಮತ್ತು ಪರ್ಯಾಯ ತಂತ್ರಜ್ಞಾನಗಳ ಬಳಕೆಯನ್ನು ಪ್ರೋತ್ಸಾಹಿಸುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಪಶ್ಚಿಮ ಶಿಕ್ಷಕರ ಮತಕ್ಷೇತ್ರದಿಂದ ಸತತ ೮ ಬಾರಿ ಆಯ್ಕೆಯಾಗಿ ವಿಶ್ವದಾಖಲೆ ನಿರ್ಮಿಸಿರುವ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರ ಗೌರವಾರ್ಥ ಇದೇ ೧೩ ರಂದು ಹುಬ್ಬಳ್ಳಿಯಲ್ಲಿ 'ಗೌರವ ಸನ್ಮಾನ' ನೀಡಿ  ಅಭಿನಂದಿಸಲಾಗುವುದು ಎಂದು ನವಲಗುಂದ ಶಾಸಕ ಎನ್.ಎಚ್.ಕೋನರಡ್ಡಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಸವರಾಜ ಹೊರಟ್ಟಿ ಅವರು ಶಿಕ್ಷಕರ ಅನೇಕ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಿದ್ದಾರೆ. ವಿವಿಧ ಇಲಾಖೆಗಳ ಜವಾಬ್ದಾರಿಯನ್ನು ಸೂಕ್ತವಾಗಿ ನಿಭಾಯಿಸಿದ್ದಾರೆ. ಹೀಗಾಗಿ ಪಕ್ಷಾತೀತವಾಗಿ ಅಭಿನಂದನಾ ಸಮಾರಂಭ ಆಯೋಜಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ರಾಜ್ಯದೆಲ್ಲೆಡೆ ಇಂದು ವಿಶ್ವ ಮಣ್ಣಿನ ದಿನ ಆಚರಿಸಲಾಯಿತು. ಮಣ್ಣಿನ ಸವಕಳಿಯನ್ನು ತಡೆಯುವುದು ಮತ್ತು ಮಣ್ಣಿನ ಜೀವವೈವಿಧ್ಯತೆಯನ್ನು ರಕ್ಷಿಸುವುದು ವಿಶ್ವ ಮಣ್ಣು ಆರೋಗ್ಯ

ದಿನಾಚರಣೆಯ ಮುಖ್ಯ ಉದ್ದೇಶವಾಗಿದೆ ಎಂದು ದಾವಣಗೆರೆ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಶ್ರೀಧರ ಮೂರ್ತಿ ತಿಳಿಸಿದ್ದಾರೆ.

<><><><>

ವಿಶ್ವ ಟೆನಿಸ್ ಲೀಗ್ ಭಾರತದ ಮೊದಲ ಆವೃತ್ತಿಗೆ ಸಂಬಂಧಿಸಿದಂತೆ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಇದೇ ೧೭ರಿಂದ ೨೦ರ ವರೆಗೆ ಬೆಂಗಳೂರಿನ ಎಸ್.ಎಂ. ಕೃಷ್ಣ ಟೆನಿಸ್ ಕ್ರೀಡಾಂಗಣದಲ್ಲಿ ಪಂದ್ಯಗಳು ನಡೆಯಲಿವೆ.  ಟೂರ್ನಿಯು ಪುರುಷರ ಸಿಂಗಲ್ಸ್, ಮಹಿಳೆಯರ ಸಿಂಗಲ್ಸ್ ಮತ್ತು ಎರಡು ಡಬಲ್ಸ್ ಸೆಟ್‌ಗಳನ್ನು ಒಳಗೊಂಡಿದೆ. ಲೀಗ್ ಹಂತದಲ್ಲಿ ಎಲ್ಲಾ ತಂಡಗಳು ಪರಸ್ಪರ ಒಂದೊಂದು ಬಾರಿ ಮುಖಾಮುಖಿಯಾಗಲಿವೆ. ಅಗ್ರ ಎರಡು ತಂಡಗಳು ಫೈನಲ್‌ಗೆ ತಲುಪಲಿವೆ. ಒಂದು ವೇಳೆ ಅಂಕಗಳು ಸಮಾನಾದರೆ ಸೂಪರ್ ಶೂಟೌಟ್ ಮೂಲಕ ಅಂತಿಮ ಜಯಶೀಲರನ್ನು ನಿರ್ಧರಿಸಲಾಗುತ್ತದೆ. ಇದೇ ೨೦ರಂದು ಫೈನಲ್ ಪಂದ್ಯ ನಡೆಯಲಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>